1 to 5th Kannada permission

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ,
ಬೆಂಗಳೂರು ಉತ್ತರ ಜಿಲ್ಲೆ, ಬೆಂಗಳೂರು

ನಮೂನೆ-2

ಸಂಖ್ಯೆ:ಅನು2.ಹೊ.ಶಾ.ಅ. 16/2011-12 ದಿನಾಂಕ: 26-03-2012

ನಿಯಮ 30ರ ಉಪನಿಯಮ 5(ಬಿ)ಪ್ರಮಾಣ ಪತ್ರ ಸಂಖ್ಯೆ: 10/2012-13

ಮೀನಾಕ್ಷಿ ಫೌಂಡೇಷನ್, ನಂ.19/1, 6ನೇ ಮುಖ್ಯ ರಸ್ತೆ, ಚಾಮುಂಡೇಶ್ವರಿ ಲೇಔಟ್, ದೊಡ್ಡಬೊಮ್ಮಸಂದ್ರ ಲೇಕ್ ಹತ್ತಿರ, ಬೆಂಗಳೂರು-97 ಇವರ ಗೌವರ್ನಿಂಗ್ ಕೌನ್ಸಿಲ್ ಕರ್ನಾಟಕ ಶಿಕ್ಷಣ ಕಾಯ್ದೆ. 1983(ಕರ್ನಾಟಕ ಆ್ಯಕ್ಟ್ 1.1995 ಸೆಕ್ಷನ್ 31) ರಂತೆ ಇಪ್ಪತ್ತಾರು, ಮಾರ್ಚ್, ಎರಡು ಸಾವಿರದ ಹನ್ನೆರಡರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1. ಕ್ರಮ ಸಂಖ್ಯೆ | : | 10/2012-13 |
| 2. ಶಾಲೆಯ ಹೆಸರು ಮತ್ತು ವಿಳಾಸ | | ಶಿಕ್ಷಾನಿಕೇತನ ಪ್ರಾಥಮಿಕ ಶಾಲೆ, ನಂ.137, 2ನೇ ಮೈನ್, ಸರ್ವೆ ನಂ.1, ಜಾರಕಬಂಡೇ ಕಾವಲ್, ನಂದಿನಿ ಲೇಔಟ್, ಬೆಂಗಳೂರು-96. |
| 3. ಅನುಮತಿ ನೀಡಿದ ತರಗತಿ | : | ಪ್ರಾಥಮಿಕ 1 ರಿಂದ 5 ಕನ್ನಡ ಮಾಧ್ಯಮ |
| 4. ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | : | 2012-13 |
| 5. ಅನುಮತಿ ನೀಡದ ಮಾಧ್ಯಮ | : | ಕನ್ನಡ (ಶಾಶ್ವತ ಅನುದಾನ ರಹಿತವಾಗಿ) (ಸಾಮಾನ್ಯ ವರ್ಗ) |
| 6. ಶುಲ್ಕ ಪಾವತಿ ಮಾಡಿರುವ ವಿವರ | : | 5,000/- ಡಿ.ಡಿ.ಸಂ: 181733 ದಿನಾಂಕ: 28-10-2011 |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ: 10 ಪುಟ ಸಂಖ್ಯೆ: 10 ವಾಲ್ಯೂಂ:02 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೊಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತುಗೊಳಪಟ್ಟು ನೀಡಲಾಗಿದೆ. ಇದರಲ್ಲಿ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ(ನೋಂದಣಿ)ಅನುಮತಿಯನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

1. ಈ ನೊಂದಾವಣೆಯು ನಿಯಮ-3ರ(4) ಮತ್ತು (5)ಕ್ಕೆ ಒಳಪಟ್ಟಿರುತ್ತದೆ.
2. ಗೌವರ್ನಿಂಗ್ ಕೌನ್ಸಿಲ್‌ರವರು ನಿಯಮ 4(4)ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು,
3. ಶಾಲಾ ನಿವೇಶನಕ್ಕೆ ವಿಸ್ತೀರ್ಣ, ಕಟ್ಟಡ, ಪಾಠೋಪಕರಣ/ಪೀಠೋಪಕರಣಗಳು, ಸಿಬ್ಬಂದಿ ವರ್ಗ, ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ. 3(ಎ) ಶಾಲೆಯನ್ನು ಅನುಮತಿ ನೀಡಿದ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸುವುದು.
4. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿಯಿಲ್ಲದೇ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
5. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಇದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
6. ಯಾವ ಆಡಳಿತ ಮಂಡಳಿಗೆ ಶಾಲೆಯನ್ನು ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ಶಾಲೆಯನ್ನು ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿಯಿಲ್ಲದೇ ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.
7. ಕರ್ನಾಟಕ ಸಮಗ್ರ ಶಿಕ್ಷಣ ಮಸೂದೆ 1983 ಕರ್ನಾಟಕ ಆ್ಯಕ್ಟ್ 1995 ಇದರಡಿಯಲ್ಲಿ ಬರುವ ಕಾಯಿದೆಗಳನ್ನು ಹಾಗೂ ರಚಿಸಲಾದ ಮತ್ತು ಅನುಮೋದನೆಗೆ ರಚಿಸಲಾಗಿರುವ ನಿಯಮಗಳ ಸಂಬಂಧದಡಿಯಲ್ಲಿ ಮತ್ತು ಪ್ರಾಧಿಕಾರ ನೀಡುವ ಎಲ್ಲಾ ಷರತ್ತುಗಳನ್ನು ಹಾಗೂ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವುದು.
8. ಶಿಕ್ಷಣ ಸಂಸ್ಥೆಯವರು ನಡೆಸುತ್ತಿರುವ ಶಾಲೆಗಳಿಗೆ ಸಂಬಂಧಿಸಿದಂತೆ ನೋಂದಣಿಯಾಗಿರುವ ಶಾಲೆಗಳೆಲ್ಲವೂ ಸರ್ಕಾರದ ಅಧಿಸೂಚನೆ ಅಡಿ ಇಡಿ 175 ಪಿ.ಎಂ.ಸಿ 95 ದಿನಾಂಕ: 7-9-1998 ಮತ್ತು ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 175 ಪಿ.ಎಂ.ಸಿ 97 ದಿನಾಂಕ: 29-12-1998ರಂತೆ ಶಾಶ್ವತ ಅನುದಾನ ರಹಿತ ಶಾಲೆಗಳೆಂಬುದಾಗಿ ಪರಿಗಣಿಸಿದೆ.
9. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು (ಶಿಸ್ತು ಮತ್ತು ನಿಯಂತ್ರಣ) ನಿಯಮ 1978ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
10. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು.
11. ತರಬೇತಿ ಹೊಂದಿದ ಹಾಗೂ ಇಲಾಖಾ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ್ದ ಶಿಕ್ಷಕರನ್ನು ನೇಮಿಸತಕ್ಕದ್ದು.

12. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ 2 ತಿಂಗಳೊಳಗಾಗಿ ಕ್ಷೇತ್ರಶಿಕ್ಷಣಾಧಿಕಾರಿಗಳು ತಪ್ಪದೇ ತಿಳಿಸತಕ್ಕದ್ದು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶವು ತಂತಾನೆ ರದ್ದಾಗುವುದು.
13. ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆ ಹಾಗೂ ಶಿಕ್ಷಕರ ಕಾರ್ಮಿಕ ವಿಮೆ ಮಾಡಿಸುವುದು.
14. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 27 ಎಸ್.ಇ.ಪಿ 03 ದಿನಾಂಕ:13-12-2003ರ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ, ಶಾಲೆಯಲ್ಲಿ ನೇಮಕಗೊಂಡಿರುವ ಸಿಬ್ಬಂದಿಯವರುಗಳ ಸೇವಾ ಪುಸ್ತಕಗಳನ್ನು ತೆರೆದು ಅದರಲ್ಲಿ ಶೈಕ್ಷಣಿಕ ಸೇವಾ ವಿವರಗಳನ್ನು ನಿಯಮಾನುಸಾರ ದಾಖಲೆ ಮಾಡಿ ಕಡ್ಡಾಯವಾಗಿ ನಿರ್ವಹಿಸುವುದು.
15. ಶಾಲಾ ಶಿಕ್ಷಕರುಗಳನ್ನು ಗಣತಿ ಕಾರ್ಯಕ್ಕೆ ಕಡ್ಡಾಯವಾಗಿ ನಿಯೋಜಿಸುವುದು.
16. ಶೈಕ್ಷಣಿಕ ದಾಖಲಾತಿ, ಹಾಜರಾತಿ ಹಾಗೂ ಪ್ರತಿ ತಿಂಗಳು ಶೈಕ್ಷಣಿಕ ಪ್ರಗತಿಯನ್ನು ನೀಡುವುದು.
17. ವರ್ಗಾವಣೆ ಪತ್ರ ಹಾಗೂ ಕಛೇರಿಯ ವ್ಯವಹಾರವನ್ನು ಮುಖ್ಯ ಶಿಕ್ಷಕರು ದಾಖಲೆಗಳನ್ನು ದೃಢೀಕರಿಸಿಕೊಂಡು ಹೋಗುವುದು.
18. ಸಲ್ಲಿಸಿರುವ ಪ್ರಸ್ತಾವನೆಯು ಯಾವುದೇ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂದಲ್ಲಿ ಈ ನೋಂದಣಿಯನ್ನು ರದ್ದುಪಡಿಸಲಾಗುವುದು.
19. ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರ ಮತ್ತು ಪಠ್ಯವಸ್ತು ನಿಗದಿಕರಣ ಇತ್ಯಾದಿ) ನಿಯಮಾವಳಿಗಳು 1995ರ ನಿಯಮ 4,5, 6 ಮತ್ತು 8ರ ಅನ್ವಯ ಸುರಕ್ಷತಾ ಕ್ರಮಕ್ಕಾಗಿ ಶಾಲಾ ಕಟ್ಟಡವು ಕಡ್ಡಾಯವಾಗಿ ಉತ್ತಮ ಗುಣಮಟ್ಟದ ಮೇಲ್ಛಾವಣಿಯನ್ನು ಹೊಂದಿದ್ದು ಉತ್ತಮ ಗಾಳಿ, ಬೆಳಕಿಗೆ ಅವಕಾಶವಿರಬೇಕು. ಬಾಲಕ ಮತ್ತು ಬಾಲಕಿಯರಿಗೆ ಪ್ರತ್ಯೇಕ ಶೌಚಾಲಯಗಳನ್ನು ಒದಗಿಸಬೇಕು. ಕುಡಿಯುವ ನೀರನ್ನು ಒದಗಿಸಬೇಕು. ಶಾಲಾ ಆವರಣದಲ್ಲಿ ಅಪಾಯಕಾರಿ ಸ್ಥಳಗಳಿಗೆ ಬೇಲಿ ಹಾಕಿ ಶಾಲಾ ಆವರಣಕ್ಕೆ ಮಕ್ಕಳ ಸುರಕ್ಷತೆಗಾಗಿ ಕಾಂಪೌಂಡ್‌ನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು ಮತ್ತು ಬೆಂಕಿ ಆಕಸ್ಮಿಗಳನ್ನು ತಪ್ಪಿಸಲು ಅಗತ್ಯ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಬೇಕು.
20. ಕರ್ನಾಟಕ ಖಾಸಗಿ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು ಅವುಗಳಿಗೆ ಬದ್ಧರಾಗತಕ್ಕದ್ದು.
21. ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗದಿಕರಣ ಇತ್ಯಾದಿ) ನಿಯಮಾವಳಿ 1995ರನ್ವಯ ಇಲಾಖೆ ಮತ್ತು ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕಗಳನ್ನು ಮಾತ್ರ ಬೋಧಿಸತಕ್ಕದ್ದು ಹಾಗೂ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಹೊರೆಯಾಗದಂತೆ ಕ್ರಮ ವಹಿಸುವುದು.
22. 1 ರಿಂದ 5ನೇ ತರಗತಿಯಲ್ಲಿ ಕನ್ನಡ ಮಾತೃ ಭಾಷೆ ಮಾಧ್ಯಮ ಪುಸ್ತಕಗಳನ್ನು ಹೊರತುಪಡಿಸಿ ಆಂಗ್ಲ ಮಾಧ್ಯಮದ ಯಾವುದೇ ಪುಸ್ತಕಗಳನ್ನು ಹೆಚ್ಚುವರಿಯಾಗಿ ತರಗತಿಯಲ್ಲಿ ಬಳಸಬಾರದು.
23. ಅನುಮತಿ ನೀಡಿದ 5 ವರ್ಷಗಳವರೆಗೆ ಶಾಲಾ ಸ್ಥಳಾಂತರ ಮತ್ತು ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.
24. ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983(ಆಕ್ಟ್ 1 ಆಫ್ 1995) ಪ್ರಕಾರ ಸೆಕ್ಷನ್ 36 ರಿಂದ 39ರ ರೀತ್ಯಾ ಹಾಗೂ ಇಡಿ 131 ವಿವಿಧ 98, ಬೆಂಗಳೂರು ದಿನಾಂಕ:-04-11-99ರಂತೆ ಮಾನ್ಯತೆ ನವೀಕರಣ ಹೊಂದಲು ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 137 ವಿವಿಧ 98, ಬೆಂಗಳೂರು, ದಿನಾಂಕ: 19-05-99ರ ಪ್ರಕಾರ ಸಕ್ಷಮ ಪ್ರಾಧಿಕಾರಿಗಳಿಗೆ ಅರ್ಜಿ ಸಲ್ಲಿಸತಕ್ಕದ್ದು. ಹಾಗೂ ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ನಿಗಧಿತ ಭದ್ರತಾ ಠೇವಣಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇಡತಕ್ಕದ್ದು.
25. ನೆಲ ಅಂತಸ್ತಿನಲ್ಲಿಯೇ ತರಗತಿಗಳನ್ನು ನಡೆಸುವಂತೆ ಷರತ್ತು ವಿಧಿಸಿ ಆದೇಶ ನೀಡಿದೆ. ಒಂದು ವೇಳೆ ಸದರಿ ಷರತ್ತು ಪಾಲಿಸದಿದ್ದರೆ ನೀಡಿದ ಅನುಮತಿ ತಂತಾನೆ ರದ್ದಾಗುತ್ತದೆ.

ದಿನಾಂಕ: 26-03-2012

(ಟಿ.ಸಿ.ಚಂದ್ರಯ್ಯ)
ಉಪನಿರ್ದೇಶಕರು ಹಾಗೂ ನೋಂದಣಾಧಿಕಾರಿಗಳು

1] ಕಾರ್ಯದರ್ಶಿಗಳು, ಮೀನಾಕ್ಷಿ ಫೌಂಡೇಷನ್, ನಂ.19/1, 6ನೇ ಮುಖ್ಯ ರಸ್ತೆ, ಚಾಮುಂಡೇಶ್ವರಿ ಲೇಔಟ್, ದೊಡ್ಡಬೊಮ್ಮಸಂದ್ರ ಲೇಕ್ ಹತ್ತಿರ, ಬೆಂಗಳೂರು-97.
2] ಕ್ಷೇತ್ರ ಶಿಕ್ಷಣಾಧಿಕಾರಿಗಳು, ಉತ್ತರ ವಲಯ-1, ರಾಜಾಜಿನಗರ, ಬೆಂಗಳೂರು-10.
3] ಜ್ಞಾಪನಾ ಕಡತ / ಕಛೇರಿ ಪ್ರತಿ.

D:\my document-GIA2. G.O. ORDER.doc

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು– 560001

ಸಂಖ್ಯೆ:ಸಿ7[2] ಪ್ರಾಶಿಅ/ಭಾಷಾನೀತಿ/ 284/2015–16 ದಿನಾಂಕ: 08–01–2016

ನಮೂನೆ–4

(ನಿಯಮ 7ರ ಉಪನಿಯಮ 3ರಂತೆ)

ಪರಿಷ್ಕರಿಸಲ್ಪಟ್ಟ ನೋಂದಣಿ ಪ್ರಮಾಣ ಪತ್ರ

ಕ್ರಮ ಸಂಖ್ಯೆ: 766/2015–16

ಮೀನಾಕ್ಷಿ ಫೌಂಡೇಷನ್, ನಂ.19/1, 6ನೇ ಮುಖ್ಯರಸ್ತೆ, ಚಾಮುಂಡೇಶ್ವರಿ ಲೇಔಟ್, ದೊಡ್ಡ ಬೊಮ್ಮಸಂದ್ರ ಲೇಕ್ ಹತ್ತಿರ, ಬೆಂಗಳೂರು–97 (ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸವನ್ನು ನಮೂದಿಸುವುದು) ಈ ಸಂಸ್ಥೆಯು ಕೆಳಗಿನ ಶಾಲೆಯನ್ನು ನಡೆಸಲು ನೋಂದಾಯಿಸಲ್ಪಟ್ಟಿದೆ.

| ಕ್ರ. ಸಂ. | ಶಾಲೆಯ ಹೆಸರು ಮತ್ತು ವಿಳಾಸ (ಸಂಸ್ಥೆಯ ವರ್ಗ) | ಅನುಮತಿ ನೀಡಿದ ತರಗತಿ | ಪ್ರಾರಂಭಿಸಿದ ವರ್ಷ | ಅನುಮತಿ ನೀಡಿದ ಮಾಧ್ಯಮ | ಪಾವತಿಸಿರುವ ಶುಲ್ಕ |
|---|---|---|---|---|---|
| 1 | ಶಿಕ್ಷಾನಿಕೇತನ ಪ್ರಾಥಮಿಕ ಶಾಲೆ, ನಂ.137, 2ನೇ ಮೈನ್, ಸರ್ವೆ ನಂ.1, ಜಾರಕಬಂಡೆ ಕಾವಲ್, ನಂದಿನಿ ಲೇಔಟ್, ಬೆಂಗಳೂರು–96 | 1 ರಿಂದ 5ನೇ ತರಗತಿ ಕನ್ನಡ ಮಾಧ್ಯಮ ಶಾಶ್ವತ ಅನುದಾನರಹಿತ | 2012–13 | ಕನ್ನಡ ಮಾಧ್ಯಮ | ರೂ.5000/– |

ಮೇಲಿನ ಆಡಳಿತ ಮಂಡಳಿಯು, ಕರ್ನಾಟಕ ಶಿಕ್ಷಣ ಕಾಯಿದೆ 1983ರ(1995ರ ಕರ್ನಾಟಕ ಕಾಯಿದೆ–1) ಸೆಕ್ಷನ್–91 ರ ಉಪನಿಯಮ (5) ರಲ್ಲಿನ ಅವಕಾಶಗಳಂತೆ, ಈ ಮೊದಲು ನೋಂದಣಿ ಮಾಡಿದ ಶಾಲೆಯ ವಿವರಗಳಲ್ಲಿ ಬದಲಾವಣೆಗಳಾಗಿರುವುದನ್ನು ವರದಿ ಮಾಡಿ, ಮೂಲ ನೋಂದಣಿ ಪ್ರಮಾಣ ಪತ್ರವನ್ನು ಪರಿಷ್ಕರಿಸುವಂತೆ ಕೋರಿ ನಮೂನೆ–3ರಲ್ಲಿ ಅರ್ಜಿಯನ್ನು ಸಲ್ಲಿಸಿರುತ್ತದೆ.

ಪ್ರಯುಕ್ತ, ಈ ಮೊದಲು ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಬೆಂಗಳೂರು ಪ್ರಾಧಿಕಾರದಿಂದ ಮೂಲ ನೋಂದಣಿ ಪ್ರಮಾಣ ಪತ್ರ ವಿತರಿಸಲಾಗಿದ್ದು–10/2012–13 ಕ್ರಮ ಸಂಖ್ಯೆಯ ಹಾಗೂ 26–03–2012 ರ ದಿನಾಂಕದ ನೋಂದಣಿ ಪ್ರಮಾಣ ಪತ್ರವನ್ನು ಹಿಂಪಡೆದಿದೆ ಮತ್ತು ರದ್ದುಪಡಿಸಿದೆ ಹಾಗೂ ಸಂಬಂಧಿತ ವಹಿಯಲ್ಲಿ ಅಗತ್ಯ ನಮೂದುಗಳನ್ನು ಮಾಡುವಂತೆ ಆ ಮೂಲ ನೋಂದಣಿ ಪ್ರಾಧಿಕಾರಿಗೆ ಸೂಚಿಸಿದೆ.

ಹಾಗೂ, ಇದೀಗ ಪರಿಷ್ಕೃತ ನೋಂದಣಿ ಪ್ರಮಾಣ ಪತ್ರವನ್ನು ಮೀನಾಕ್ಷಿ ಫೌಂಡೇಷನ್, ನಂ.19/1, 6ನೇ ಮುಖ್ಯರಸ್ತೆ, ಚಾಮುಂಡೇಶ್ವರಿ ಲೇಔಟ್, ದೊಡ್ಡ ಬೊಮ್ಮಸಂದ್ರ ಲೇಕ್ ಹತ್ತಿರ, ಬೆಂಗಳೂರು–97 ಇವರ ಹೆಸರಿಗೆ (ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸವನ್ನು ನಮೂದಿಸುವುದು) ಕೆಳಕಂಡಂತೆ ಪರಿಷ್ಕೃತ ವಿವರಗಳನ್ನು ನಮೂದಿಸಿ ವಿತರಿಸಲಾಗಿದೆ.

| ಕ್ರಮ ಸಂ. | ಶಾಲೆಯ ಹೆಸರು ಮತ್ತು ವಿಳಾಸ ಮತ್ತು ವರ್ಗ | ಬೋಧನ ಮಾಧ್ಯಮ | ಅನುಮತಿ ನೀಡಿದ ತರಗತಿಗಳು | ಶೈಕ್ಷಣಿಕ ಸಾಲು | ಶುಲ್ಕದ ವಿವರ |
|---|---|---|---|---|---|
| 1 | ಶಿಕ್ಷಾನಿಕೇತನ ಪ್ರಾಥಮಿಕ ಶಾಲೆ, ನಂ.137, 2ನೇ ಮೈನ್, ಸರ್ವೆ ನಂ.1, ಜಾರಕಬಂಡೆ ಕಾವಲ್, ನಂದಿನಿ ಲೇಔಟ್, ಬೆಂಗಳೂರು–96 | ಆಂಗ್ಲ | 1 ರಿಂದ 5ನೇ ತರಗತಿ ಆಂಗ್ಲ ಮಾಧ್ಯಮ ಶಾಶ್ವತ ಅನುದಾನರಹಿತ | 2015–16 | ——— |

ಈ ಹಿಂದಿನ ಪ್ಯಾರಾಗಳಲ್ಲಿ ಉಲ್ಲೇಖಿಸಿರುವ ಆಡಳಿತ ಮಂಡಳಿಯ ವಿವರಗಳನ್ನು, ಶಿಕ್ಷಣ ಸಂಸ್ಥೆಗಳ ಪರಿಷ್ಕೃತ ನೋಂದಣಿ ಪ್ರಮಾಣ ಪತ್ರವನ್ನು ವಿತರಿಸಲಾಗಿರುವ ನೋಂದಣಿ ವಹಿಯ 01 ವ್ಯಾಲ್ಯೂಂನ ಪುಟ ಸಂಖ್ಯೆ: 92 ರ ಕ್ರಮಸಂಖ್ಯೆ:766 ರಲ್ಲಿ ನೋಂದಾಯಿಸಲಾಗಿದೆ.

ಈ ನೋಂದಣಿ ಪ್ರಮಾಣ ಪತ್ರವನ್ನು ದಿನಾಂಕ: 08-01-2016ರಂದು ವಿತರಿಸಲಾಗಿದೆ.

ಸ್ಥಳ: ಬೆಂಗಳೂರು
ದಿನಾಂಕ: 08-01-2016

(ಕೆ.ಎಸ್.ಸತ್ಯಮೂರ್ತಿ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಹಾಗೂ ನೋಂದಣಿ ಪ್ರಾಧಿಕಾರಿ.

ಗೆ,

1. ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ.
2. ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಉತ್ತರ ವಲಯ-04, ಯಲಹಂಕ, ಬೆಂಗಳೂರು-64
3. ಕಾರ್ಯದರ್ಶಿಗಳು, ಮೀನಾಕ್ಷಿ ಫೌಂಡೇಷನ್, ನಂ.19/1, 6ನೇ ಮುಖ್ಯರಸ್ತೆ, ಚಾಮುಂಡೇಶ್ವರಿ ಲೇಔಟ್, ದೊಡ್ಡ ಬೊಮ್ಮಸಂದ್ರ ಲೇಕ್ ಹತ್ತಿರ, ಬೆಂಗಳೂರು-97
4. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

## ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು,ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ: ಸಿ7[2]ಪ್ರಾಶಿಅ:ನೋಂದಣಿ/23/2012-13 ದಿನಾಂಕ: 01/04/2013

### ನಮೂನೆ-2

(ನಿಯಮ 3 ಉಪನಿಯಮ 5 (ಐ))

ಪ್ರಮಾಣ ಪತ್ರ ಸಂಖ್ಯೆ : 193/2013-14

ಮೀನಾಕ್ಷಿ ಫೌಂಡೇಶನ್(ರಿ), ನಂ.19/1, 6ನೇ ಮುಖ್ಯರಸ್ತೆ, ಚಾಮುಂಡೇಶ್ವರಿ ಲೇಔಟ್,ದೊಡ್ಡಬೊಮ್ಮಸಂದ್ರ ಕೆರೆ ಹತ್ತಿರ, ಬೆಂಗಳೂರು-97 ಇವರಿಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆ್ಯಕ್ಟ್ 1995) ಸೆಕ್ಷನ್ 31 ರಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಇಡಿ 44 ಪಿ ಜಿ ಸಿ 2002, ದಿನಾಂಕ : 11.06.2002 ರ ಪ್ರಕಾರ ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ 193, ಪುಟ ಸಂಖ್ಯೆ:149, ವಾಲ್ಯೂಂ ಸಂಖ್ಯೆ: 16 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1. | ಕ್ರಮ ಸಂಖ್ಯೆ | 193/2013-2014 |
| 2. | ಶಾಲೆಯ ಹೆಸರು ಮತ್ತು ವಿಳಾಸ | ಶಿಕ್ಷಾ ನಿಕೇತನ ಸ್ಕೂಲ್, ನಂ.137, 2ನೇ ಮೇನ್, ಸರ್ವೇ ನಂ.1, ಹಾರಕ ಬಂಡೆ ಕಾವಲ್, ನಂದಿನಿ ಲೇಔಟ್, ಬೆಂಗಳೂರು-96. |
| 3. | ಅನುಮತಿ ನೀಡಿದ ತರಗತಿ | 6 ನೇ ತರಗತಿ 7 ನೇ ತರಗತಿ ಮತ್ತು 8ನೇ ತರಗತಿ |
| 4. | ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | 2013-2014 2014-2015 2015-2016 [Permanently without-aid] |
| 5. | ಅನುಮತಿ ನೀಡಿದ ಮಾಧ್ಯಮ | ಆಂಗ್ಲ ಮಾಧ್ಯಮ |
| 6. | ಶುಲ್ಕ ಪಾವತಿ ಮಾಡಿರುವುದು | ರೂ. 10,000/- |

ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತುಗೊಳಪಟ್ಟು ನೀಡಲಾಗಿದೆ. ಇದರಲ್ಲಿ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ [ನೋಂದಣಿ] ಅನುಮತಿಯನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

1. ಈ ನೋಂದಾವಣೆಯು ಕರ್ನಾಟಕ ಶಿಕ್ಷಣ ಸಂಸ್ಥೆಗಳು [ಖಾಸಗಿ ಶಿಕ್ಷಣ ಸಂಸ್ಥೆಗಳ ನಿಯಂತ್ರಣ,ವರ್ಗೀಕರಣ]ನಿಯಮ-1997 ನಿಯಮ-3 [5] [ಡಿ] ನಲ್ಲಿ ಸೂಚಿಸಿರುವ ಅಂಶಗಳಿಗೆ ಒಳಪಟ್ಟಿರುತ್ತದೆ.
2. ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗಧೀಕರಣ ಇತ್ಯಾದಿ) ನಿಯಮಾವಳಿಗಳು 1995ರ ನಿಯಮ 4, 5, 6 ಮತ್ತು 8 ರನ್ವಯ ಸುರಕ್ಷತಾ ಕ್ರಮವಾಗಿ, ಶಾಲಾ ಕಟ್ಟಡವು ಕಡ್ಡಾಯವಾಗಿ ಉತ್ತಮ ಗುಣಮಟ್ಟದ ಮೇಲ್ಛಾವಣಿಯನ್ನು ಹೊಂದಿದ್ದು, ಉತ್ತಮ ಗಾಳಿ ಬೆಳಕಿಗೆ ಅವಕಾಶವಿರಬೇಕು. ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳನ್ನು ಒದಗಿಸಬೇಕು. ಕುಡಿಯುವ ನೀರನ್ನು ಒದಗಿಸಿರಬೇಕು. ಶಾಲಾ ಆವರಣದಲ್ಲಿರುವ ಅಪಾಯಕಾರಿ ಸ್ಥಳಗಳಿಗೆ ಬೇಲಿ ಹಾಕಿ, ಶಾಲಾ ಆವರಣಕ್ಕೆ ಮಕ್ಕಳ ಸುರಕ್ಷತೆಗಾಗಿ ಕಾಂಪೌಂಡನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು. ಮತ್ತು ಬೆಂಕಿ ಆಕಸ್ಮಿಕಗಳನ್ನು ತಪ್ಪಿಸಲು ಅಗತ್ಯ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಬೇಕು.
3. ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್-41[5] ರಂತೆ ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
5. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸತಕ್ಕದ್ದಲ್ಲ.
6. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿದ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆ್ಯಕ್ಟ್ ಸಂಖ್ಯೆ:1:95]ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದ್ದು.
7. ಈ ಪ್ರಾಥಮಿಕ ಶಾಲಾ ನೋಂದಾವಣೆಯು ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 175 ಪಿ.ಎಂ.ಸಿ 95, ದಿನಾಂಕ : 07-09-98 ಮತ್ತು ದಿನಾಂಕ : 29-12-98 ರ ಪ್ರಕಾರ ಶಾಶ್ವತ ಅನುದಾನರಹಿತವಾಗಿರುತ್ತದೆ. [Permanently without-aid]
8. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ [ಶಿಸ್ತು ಮತ್ತು ನಿಯಂತ್ರಣ] ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು/ ಅವುಗಳಿಗೆ ಬದ್ಧವಾಗಿರತಕ್ಕದ್ದು.

---2]

9. ಕರ್ನಾಟಕ ಶಿಕ್ಷಣ ಸಂಸ್ಥೆಗಳ(ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ವಸ್ತುನಿಗಧೀಕರಣ ಇತ್ಯಾದಿ) ನಿಯಮಾವಳಿ 1995ರನ್ವಯ ಇಲಾಖೆ ಮತ್ತು ಸರ್ಕಾರ ನಿಗಧಿಪಡಿಸಿದ ಪಠ್ಯಪುಸ್ತಕಗಳನ್ನು ಮಾತ್ರ ಬೋಧಿಸತಕ್ಕದ್ದು ಹಾಗೂ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಹೊರೆಯಾಗದಂತೆ ಕ್ರಮವಹಿಸುವುದು.

10. ಕರ್ನಾಟಕ ಶಿಕ್ಷಣ ಸಂಸ್ಥೆಗಳ(ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ವಸ್ತುನಿಗಧೀಕರಣ ಇತ್ಯಾದಿ) ನಿಯಮಾವಳಿ 1995. ದಿನಾಂಕ:04-10-96ರ ನಿಯಮ-10ರಂತೆ ಟರ್ಮ್ ಶುಲ್ಕ, ಬೋಧನಾ ಶುಲ್ಕ, ವಿಶೇಷ ಅಭಿವೃದ್ಧಿ ಶುಲ್ಕಗಳನ್ನು ಮಾತ್ರ ವಸೂಲಿ ಮಾಡತಕ್ಕದ್ದು ಹಾಗೂ ನಿಯಮ 10(04)ರಂತೆ ಶಾಲೆಯಲ್ಲಿ ವಿದ್ಯಾರ್ಥಿ/ಪೋಷಕರಿಂದ ವಸೂಲಿ ಮಾಡುವ ಶುಲ್ಕಗಳ ವಿವರಗಳ ಒಂದು ಬ್ರೋಚರ್ ಅನ್ನು ಶಾಲೆಯ ಸೂಚನಾಫಲಕದಲ್ಲಿ ಕಡ್ಡಾಯವಾಗಿ ಪ್ರಕಟಿಸಿ, ಅದರ ಒಂದು ಪ್ರತಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ/ಉಪನಿರ್ದೇಶಕರಿಗೆ ಸಲ್ಲಿಸತಕ್ಕದ್ದು.

11. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.39. ವಿವಿಧ-99. ದಿನಾಂಕ:14-03-2000ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ರೆಗ್ಯೂಲೇಷನ್ ಆಫ್ ಸರ್‌ಟಿನ್ ಫೀಸ್ ಅಂಡ್ ಡೊನೇಶನ್ಸ್) ನಿಯಮ-1999ರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು ಹಾಗೂ ಈ ನಿಯಮದಂತೆ ಯಾವುದೇ ವಂತಿಗೆಯನ್ನು ವಸೂಲು ಮಾಡುವಂತಿಲ್ಲ.

12. ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ್ 1 ಆಫ್ 1995) ಪ್ರಕಾರ ಸೆಕ್ಷನ್ 36 ರಿಂದ 39 ರ ರೀತ್ಯಾ ಹಾಗೂ ಇಡಿ 131 ವಿವಿಧ 98, ಬೆಂಗಳೂರು, ದಿನಾಂಕ : 04-11-99 ರಂತೆ ಮಾನ್ಯತೆ ನವೀಕರಣ ಹೊಂದಲು ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ 137 ವಿವಿಧ 98, ಬೆಂಗಳೂರು, ದಿನಾಂಕ : 19-05-99 ರ ಪ್ರಕಾರ ಸಕ್ಷಮ ಪ್ರಾಧಿಕಾರಿಗಳಿಗೆ ಅರ್ಜಿ ಸಲ್ಲಿಸತಕ್ಕದ್ದು ಹಾಗೂ ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ನಿಗಧಿತ ಭದ್ರತಾ ಠೇವಣಿಯನ್ನು ಜಿಲ್ಲಾ ಉಪ ನಿರ್ದೇಶಕರ ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇಡತಕ್ಕದ್ದು.

13. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.52ವಿವಿದ.99 ದಿನಾಂಕ:-02-02-2000ರ ಅನೆಕ್ಸರ್-5ರ ನಿಯಮದಂತೆ ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ಪಾಲಿಸತಕ್ಕದ್ದು.

**14. 6ನೇ ತರಗತಿಯಿಂದ 8ನೇ ತರಗತಿಗೆ ಬಿಇಡಿ ತರಬೇತಿ ಹೊಂದಿದ ಶಿಕ್ಷಕರನ್ನು ನೇಮಿಸಿಕೊಳ್ಳತಕ್ಕದ್ದು.**

15. ಕರ್ನಾಟಕ ಶಿಕ್ಷಣ ಮಸೂದೆಯ ನಿಯಮಗಳಂತೆ ಶಾಲೆಗೆ ಒದಗಿಸಬೇಕಾದ ಮೂಲಭೂತ ಸೌಕರ್ಯಗಳಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದ ಒಳಗಾಗಿ ಹಾಗೂ ಆಟದ ಮೈದಾನ ಮತ್ತು ಶಾಲಾ ಕಟ್ಟಡವನ್ನು ಮೂರು ವರ್ಷದೊಳಗಾಗಿ ಒದಗಿಸಿಕೊಳ್ಳತಕ್ಕದ್ದು.

16. ಶಾಲಾ ಕೆಲಸದ ಅವಧಿ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

17. ಶಾಲೆಯನ್ನು ಪ್ರಾರಂಭಿಸಿ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತನ್ನಿಂದ ತಾನೇ ರದ್ದಾಗುವುದು.

18. ಈಗಾಗಲೇ 1 ರಿಂದ 7ನೇ ತರಗತಿ ಕನ್ನಡ ಮಾಧ್ಯಮ ಇದ್ದಲ್ಲಿ, ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಮಂಜೂರಾತಿಯಿಂದ ಕನ್ನಡ ಮಾಧ್ಯಮದ ತರಗತಿಗಳಿಗೆ ಯಾವುದೇ ರೀತಿ ಧಕ್ಕೆ ಬಾರದಂತೆ ನೋಡಿಕೊಳ್ಳುವುದು.

19. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 27 ಎಸ್‌ಇಪಿ 03 ದಿನಾಂಕ:-13-02-2003 ರ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ, ಶಾಲೆಯಲ್ಲಿ ನೇಮಕಗೊಂಡಿರುವ ಶಿಕ್ಷಕರ/ಸಿಬ್ಬಂದಿ ಸೇವಾ ವಿವರಗಳನ್ನು ನಿಯಮಾನುಸಾರ ದಾಖಲು ಮಾಡಿ ಕಡ್ಡಾಯವಾಗಿ ನಿರ್ವಹಿಸುವುದು.

20. ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ತಪ್ಪದೇ ನಿಯೋಜಿಸುವುದು.

21. ಪ್ರಸ್ತಾವನೆಯಲ್ಲಿ ಸಲ್ಲಿಸಿರುವ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂದಲ್ಲಿ ಈ ನೋಂದಣಿಯನ್ನು ರದ್ದುಪಡಿಸಲಾಗುವುದು.

22. ಪ್ರತಿ ತರಗತಿಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ 50 ಕ್ಕೆ ಮೀರಬಾರದು.

23. ಅನುಮತಿ ನೀಡಿದ 5 ವರ್ಷಗಳವರೆಗೆ ಶಾಲಾ ಸ್ಥಳಾಂತರ ಮತ್ತು ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.

24. ಸರ್ಕಾರದ ಪತ್ರದ ಸಂಖ್ಯೆ:ಇಡಿ:122;ಎಸ್.ಇ.ಎಸ್.2007 ಬೆಂಗಳೂರು ದಿನಾಂಕ:17.05.2007 ರ ಪತ್ರದಲ್ಲಿನ ಷರತ್ತುಗಳನ್ನು ಪೂರೈಸತಕ್ಕದ್ದು.

25. 1 ರಿಂದ 5 ನೇ ತರಗತಿವರೆಗೆ ಯಾವ ಮಾಧ್ಯಮದಲ್ಲಿ ನೋಂದಣಿ ನೀಡಲಾಗಿದೆಯೋ ಅದೇ ಮಾಧ್ಯಮದಲ್ಲಿ ಶಾಲೆಯನ್ನು ನಡೆಸತಕ್ಕದ್ದು.

[ಎಸ್.ಆರ್.ಉಮಾಶಂಕರ್]
ಆಯುಕ್ತರು ಹಾಗೂ ನೋಂದಣಿ ಅಧಿಕಾರಿಗಳು,

ಪ್ರತಿಯನ್ನು

1. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ ರವರಿಗೆ,
2. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಉತ್ತರ ವಲಯ-1
3. ಕಾರ್ಯದರ್ಶಿಗಳು, ಮೀನಾಕ್ಷಿ ಫೌಂಡೇಶನ್(ರಿ), ನಂ.19/1, 6ನೇ ಮುಖ್ಯರಸ್ತೆ, ಚಾಮುಂಡೇಶ್ವರಿ ಲೇಔಟ್, ದೊಡ್ಡಬೊಮ್ಮಸಂದ್ರ ಕೆರೆ ಹತ್ತಿರ, ಬೆಂಗಳೂರು-97.
4. ಕಛೇರಿ ಪ್ರತಿ.

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ**
**ಬೆಂಗಳೂರು – 560 001**

ಸಂಖ್ಯೆ:ಸಿ8[1]ಶಾಶಿಅ ಹೊಪ್ರೌಶಾ ನೋಂ 209/2015-16 ದಿನಾಂಕ: 15.09.2016

ನಮೂನೆ-2

[ನಿಯಮ 3 ಉಪನಿಯಮ 5(ಬಿ)

**ಪ್ರಮಾಣ ಪತ್ರ ಸಂಖ್ಯೆ:135/2016-17**

ಮೀನಾಕ್ಷಿ ಫೌಂಡೇಷನ್, ನಂ:19/1, 6ನೇ ಮುಖ್ಯ ರಸ್ತೆ, ಚಾಮುಂಡೇಶ್ವರಿ ಲೇಔಟ್, ಬೆಂಗಳೂರು-97 ಇವರ ಗೌವರ್ನಿಂಗ್ ಕೌನ್ಸಿಲ್‌ನ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರೌಢಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್ 1995] ಸೆಕ್ಷನ್ 31ರಂತೆ ಈ ಮೇಲೆ ನಮೂದಿಸಿರುವ ಶಿಕ್ಷಣ ಸಂಸ್ಥೆಗೆ 2016-17ನೇ ಸಾಲಿನಿಂದ ಹೊಸ ಆಂಗ್ಲ ಮಾಧ್ಯಮ ಪ್ರೌಢಶಾಲೆ ಪ್ರಾರಂಭಿಸಲು ಮಂಜೂರಾತಿ ನೀಡಿ ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | |
|---|---|
| 1. ಕ್ರಮ ಸಂಖ್ಯೆ | : 135/2016-17 |
| **2. ಶಾಲೆಯ ಹೆಸರು ಮತ್ತು ವಿಳಾಸ** | **: ಶಿಕ್ಷಾನಿಕೇತನ್ ಆಂಗ್ಲ ಪ್ರೌಢಶಾಲೆ, ನಂ. 137, 144, 2ನೇ ಮುಖ್ಯ ರಸ್ತೆ, ರಾಜೀವ್‌ಗಾಂಧಿನಗರ, ಜೆ.ಬಿ ಕಾವಲ್, ನಂದಿನಿ ಬಡಾವಣೆ, ಬೆಂಗಳೂರು.96** |
| 3. ಅನುಮತಿ ನೀಡಿದ ತರಗತಿ | : 9ನೇ ತರಗತಿ, 10ನೇ ತರಗತಿ |
| 4. ಪ್ರಾರಂಭಿಸಬೇಕಾದ ತರಗತಿಗಳು | : 9ನೇ ತರಗತಿ, 10ನೇ ತರಗತಿ [ಶಾಶ್ವತ ಅನುದಾನ ರಹಿತವಾಗಿ] |
| 5. ಶೈಕ್ಷಣಿಕ ವರ್ಷ | : 2016-17, 2017-18 |
| 6. ಅನುಮತಿ ನೀಡಿದ ಮಾಧ್ಯಮ | : ಆಂಗ್ಲ ಮಾಧ್ಯಮ |
| 7. ಶುಲ್ಕ ಪಾವತಿ ಮಾಡಿರುವುದು | ರೂ:100000/-ಡಿಡಿ ಸಂಖ್ಯೆ: 40918 ದಿ: 26.10.2015<br>ರೂ: 20000/- ಡಿಡಿ ಸಂಖ್ಯೆ: 40917 ದಿ:26.10.2015 |

**ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ: 135/2016-17 ಪುಟ ಸಂಖ್ಯೆ: 245 ವಾಲ್ಯೂಂ ಸಂಖ್ಯೆ: 09 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.**

1. ಈ ನೋಂದಾವಣೆಯು ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.
2. ಗೌವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
4. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
5. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
6. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
7. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆಕ್ಟ್ ಸಂಖ್ಯೆ:1:96] ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
8. ಈ ಪ್ರೌಢಶಾಲಾ ನೊಂದಾವಣೆಯಂತೆ ಸರ್ಕಾರಿ ಅಧಿಸೂಚನೆ ಸಂ:ಇಡಿ:175:ಪಿಎಂಸಿ:95, ದಿ:07-09-1998 ಮತ್ತು ದಿ:29-12-1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 10-00 ಛಾಪಾ ಕಾಗದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.
9. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು] ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
10. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು

11. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಇರತಕ್ಕದ್ದು. ಪ್ರತಿ ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.
12. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.
13. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36–39ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳ ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.
14. ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.
15. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.
16. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.
17. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.
18. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.
19. ಪ್ರಥಮ ಮಾನ್ಯತೆಗಾಗಿ ಉಪನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸುವುದು, ಉಪನಿರ್ದೇಶಕರು ಶಿಕ್ಷಣ ಕಾಯ್ದೆ ಮತ್ತು ಸರ್ಕಾರದ ಆದೇಶ ದಿನಾಂಕ30–09–2007ರ ಅನುಬಂಧ–3ರ ಚೆಕ್‌ಲಿಸ್ಟ್‌ನಲ್ಲಿ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ನೀಡುವುದು, ನಿಗದಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ.
20. ಶಾಲೆಯ ಕಟ್ಟಡ ಸುರಕ್ಷತೆಯ ಬಗ್ಗೆ ಬೆಂಕಿ ಬಿರುಗಾಳಿ ವಿದ್ಯುತ್ ಅಪಘಾತ ಮುಂತಾದ ಅವಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.
21. ಶಾಲಾ ಆವರಣದ 100 ಗಜಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದೆ ಎಂದು ಶಾಲಾ ಮುಂಭಾಗದಲ್ಲಿ ಪ್ರಕಟಣೆ ನೀಡುವುದು.
22. ಶಾಲಾ ಆಡಳಿತ ಮಂಡಳಿ ಯಾವುದೇ ತಪ್ಪು ಮಾಹಿತಿಗಳನ್ನು ನೀಡಿದ್ದಲ್ಲಿ, ನೋಂದಣಿಯನ್ನು ರದ್ದುಪಡಿಸುವ ಅಧಿಕಾರ ಇಲಾಖೆ ಕಾಯ್ದಿರಿಸಿಕೊಂಡಿದೆ.
23. ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 369 ಪಿ.ಜಿ.ಸಿ 2014, ದಿನಾಂಕ: 11.11.2014ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 14.11.2014 ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.
24. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 140 ಪಿಜಿಸಿ 2016 ದಿನಾಂಕ: 20.05.2016 ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

[ಮಾನ್ಯ ಆಯುಕ್ತರಿಂದ ಆದೇಶಿಸಲ್ಪಟ್ಟಿದೆ]

ನಿರ್ದೇಶಕರು[ಪ್ರೌಢ ಶಿಕ್ಷಣ]
ಹಾಗೂ ನೋಂದಣಿ ಅಧಿಕಾರಿಗಳ ಪರವಾಗಿ
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ:

1. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ,ಬೆಂಗಳೂರು ಉತ್ತರಜಿಲ್ಲೆ, ಕೆ.ಜಿ. ರಸ್ತೆ, ಕಾವೇರಿ ಭವನ ಕಟ್ಟಡ, ಬೆಂಗಳೂರು–02
2. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ವಲಯ-1, ರಾಜಾಜಿನಗರ, ಬೆಂಗಳೂರು–10
3. ಕಾರ್ಯದರ್ಶಿಗಳು, ಮೀನಾಕ್ಷಿ ಫೌಂಡೇಷನ್, ನಂ19/1, 6ನೇ ಮುಖ್ಯ ರಸ್ತೆ, ಚಾಮುಂಡೇಶ್ವರಿ ಲೇಔಟ್, ಬೆಂಗಳೂರು–97
4. ಕಛೇರಿ ಪ್ರತಿ. e:\siddu\new school 2016-17.docx